**1ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ., ರವರ ನ್ಯಾಯಾಲಯ, ನಂಜನಗೂಡು**

**ಸಿ.ಸಿಃ 404/2015**

| | | | |
|---|---|---|---|
| ಸಾಕ್ಷಿದಾರರ ಹೆಸರು | | **ಬಸವರಾಜು** | ಪ್ರಾಸಾಃ 5 |
| ತಂದೆಯ/ಗಂಡನ ಹೆಸರು | | ಬಸವಯ್ಯ | ಚಾಸಾಃ 4 |
| ವಯಸ್ಸು | | 55 ವರ್ಷ | |
| ಕೆಲಸ | | ಕೂಲಿ | ಸಾ ಪ್ರ ಬೋ |
| ವಾಸ | | ನಂದಗುಂದಪುರ ಗ್ರಾಮ | ದಿಃ 19/02/2024 |

**ಮುಖ್ಯ ವಿಚಾರಣೆ ಪ್ರಾಜ್ಞ ಸ.ಸ.ಅ ರವರಿಂದಃ**

ಸಾಕ್ಷಿಗೆ ಒಂದು ದಾಖಲಾತಿ ತೋರಿಸಿದ್ದು ಅದು ಸ್ಥಳ ಪಂಚನಾಮೆ ಯಾಗಿದ್ದು, ಸ್ಥಳ ಪಂಚನಾಮೆ ಯಲ್ಲಿರುವ ತನ್ನ ಹೆಬ್ಬೆಟ್ಟಿನ ಗುರುತನ್ನು ಸಾಕ್ಷಿ ನೋಡಿ ಗುರುತಿಸಿದ್ದು, ಸ್ಥಳ ಪಂಚನಾಮೆಯನ್ನು ಈಗಾಗಲೇ ನಿಪಿ-2 ಎಂದು ಗುರುತಿಸಲಾಗಿರುತ್ತದೆ. ನಿಪಿ- 2 ರಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿಲ್ಲ. ಸುಮಾರು 7-8 ವರ್ಷಗಳ ಹಿಂದೆ ಪೊಲೀಸರು ನಮ್ಮ ಗ್ರಾಮಕ್ಕೆ ಬೀಟ್ ಗೆ ಬಂದಾಗ ರುಜು ಮಾಡಿರುತ್ತೇನೆ. ಪೊಲೀಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆ ಮಾಡಿಲ್ಲ ಮತ್ತು ಯಾವುದೇ ವಸ್ತುಗಳನ್ನು ಅಮಾನತ್ತು ಪಡಿಸಿಕೊಂಡಿಲ್ಲ. ಸಾಕ್ಷಿಯು ನ್ಯಾಯಾಲಯದ ಮುಂದಿರುವ ಮಚ್ಚು, ಬಿದಿರು ದೊಣ್ಣೆ ಮತ್ತು ರಕ್ತದ ಕಲೆಯಾಗಿರುವ ಶರ್ಟ್ ಅನ್ನು ನೋಡಿ ಗುರುತಿಸಿಲ್ಲ.
(ಈ ಹಂತದಲ್ಲಿ ಸಾಕ್ಷಿಯು ಪ್ರತಿಕೂಲ ಸಾಕ್ಷಿ ನುಡಿಯುತ್ತಿದ್ದಾರೆ. ಮಾನ್ಯ ಎ.ಪಿ.ಪಿ.ಯವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಅನುಮತಿ ನೀಡಲಾಯಿತು)

**ಪಾಟೀ ಸವಾಲುಃ ಪ್ರಾಜ್ಞ ಸ.ಸ.ಅ ರವರಿಂದಃ**

ದಿನಾಂಕ 21.04.2014 ರಂದು ತುಂನೇರಳೆ ಎಲ್ಲೆಗೆ ಸೇರಿದ ಸರ್ವೆ ನಂಬರ್ 101/102 ಜಮೀನಿನಲ್ಲಿ ಚಾಸಾ-2 ರವರು ಕೃತ್ಯ ನಡೆದ ಸ್ಥಳವನ್ನು ಪೊಲೀಸರಿಗೆ ತೋರಿಸಿದ ಮೇರೆಗೆ ಅವರುಗಳು ನನ್ನ ಮತ್ತು ಚಾಸಾ-3 ರವರ ಸಮಕ್ಷಮ ಬೆಳಗ್ಗೆ 10.15 ರಿಂದ 11.00 ರವರೆಗೆ ನಿಪಿ-2 ರಂತೆ ಪಂಚನಾಮೆ ಜರುಗಿಸಿ

ಆರೋಪಿತರು ಕೃತ್ಯಕ್ಕೆ ಬಳಸಿದ್ದ ಒಂದು ಮಚ್ಚು, ಬಿದಿರು ದೊಣ್ಣೆ ಮತ್ತು ಕೃತ್ಯ ನಡೆದ ಕಾಲಕ್ಕೆ ಚಾಸಾ-1 ರವರು ಧರಿಸಿದ್ದ ಶರ್ಟ್ ಅನ್ನು ಚಾಸಾ-2 ರವರು ಹಾಜರುಪಡಿಸಿದ ಮೇರೆಗೆ ಅಮಾನತ್ತು ಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಪಂಚನಾಮೆಯನ್ನು ಆರೋಪಿತರು ಮತ್ತು ಚಾಸಾ-1 ರವರ ನಡುವೆ ನಡೆದಿದ್ದ ಗಲಾಟೆಯ ವಿಚಾರವಾಗಿ ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ. ಈ ಮೇಲಿನ ಎಲ್ಲಾ ವಿಚಾರಗಳು ಗೊತ್ತಿದ್ದರೂ ಕೂಡ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲುಃ</u>** ಆರೋಪಿ ಪರ ವಕೀಲರಿಂದ ಇಲ್ಲ ಎಂದು ತಿಳಿಸಿರುತ್ತಾರೆ.

ನನ್ನ ಉಕ್ತಲೇಖನದ ಮೇರೆಗೆ ತೆರದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.

**ಓ ಹೇ ಕೇ ಸ ಇದೆ ಎಂ ಒ**

ಸಹಿ/-

**1 ನೇ ಹೆಚ್ಚುವರಿ ಸಿ.ಜೆ ಮತ್ತು ಪ್ರದನ್ಯಾದಂ**

**ನಂಜನಗೂಡು**